ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ನೀಡಲಾಗುತ್ತಿರುವ ಪ್ರಮಾಣ ಪತ್ರಗಳನ್ನು ನಿಲ್ಲಿಸಿರುವ ಬಗ್ಗೆ

1484 (1794) ಶ್ರೀ ಹಾಲಾಡಿ ಶ್ರೀನಿವಾಸಶೆಟ್ಟಿ (ಕುಂದಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜನಸಂಖ್ಯೆ 50 ಸಾವಿರಕ್ಕಿಂತ ಕಡಿಮೆ ಇರುವ ಪುರಸಭೆ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳೆಂದು ನೀಡುತ್ತಿರುವ ಪ್ರಮಾಣ ಪತ್ರವನ್ನು ನಿಲ್ಲಿಸಲಾಗಿದೆಯೇ

ಆ) ನಿಲ್ಲಿಸಿದಲ್ಲಿ, ಆದೇಶ ಹೊರಡಿಸಿದ ದಿನಾಂಕದ ಹಿಂದಿನ ದಿನಾಂಕದವರೆಗೆ 50 ಸಾವಿರಕ್ಕಿಂತ ಕಡಿಮೆ ಇರುವ ಪುರಸಭೆ ಪ್ರದೇಶದವರಿಗೆ ಗ್ರಾಮೀಣ ಅಭ್ಯರ್ಥಿಗಳೆಂದು ಪರಿಗಣಿಸಿ ಗ್ರಾಮೀಣ ಪ್ರಮಾಣ ಪತ್ರ ನೀಡಲಾಗುವುದೇ;

ಇ) ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು;

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು)

ಅ) ಕರ್ನಾಟಕ ಗ್ರಾಮೀಣ ಅಭ್ಯರ್ಥಿಗಳಿಗಾಗಿ (ರಾಜ್ಯ ಸಿವಿಲ್ ಸೇವೆಗಳಲ್ಲಿ) ನೇಮಕಾತಿಗಳ ಅಥವಾ ಹುದ್ದೆಗಳ ಮೀಸಲಾತಿ ಅಧಿನಿಯಮ 2000 ದಿನಾಂಕ 30-1-2001 ರಿಂದ ಜಾರಿಗೆ ಬಂದಿದೆ. ಗ್ರಾಮೀಣ ಅಭ್ಯರ್ಥಿ ಎನ್ನುವ ಪದವನ್ನು ಈ ಕೆಳಗೆ ಉದ್ಧರಿಸಿದಂತೆ ವ್ಯಾಖ್ಯಾನಿಸಲಾಗಿದೆ.

(i) ಗ್ರಾಮೀಣ ಅಭ್ಯರ್ಥಿ" ಎಂದರೆ (1) ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10ನೇ ತರಗತಿಯವರೆಗೆ;

(ii) ಒಂದು ಹುದ್ದೆಗೆ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್.ಎಸ್.ಎಲ್.ಸಿ ಗಿಂತ ಕಡಿಮೆಯಾಗಿದ್ದಲ್ಲಿ, 1ನೇ ತರಗತಿಯಿಂದ ಅರ್ಹತಾ ಪರೀಕ್ಷೆಯವರೆಗೆ;

ಕರ್ನಾಟಕ ಪೌರನಿಗಮಗಳ ಅಧಿನಿಯಮ, 1976 ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ರಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ. ಆದುದರಿಂದ, 50 ಸಾವಿರದ ಜನ ಸಂಖ್ಯೆಯ ಮಿತಿ ಈಗ ಅನ್ವಯವಾಗುವುದಿಲ್ಲ, ಈ ಹಿನ್ನೆಲೆಯಲ್ಲಿ 50 ಸಾವಿರದ ಜನ ಸಂಖ್ಯೆಯ ಮಿತಿಯನ್ನು ಆಧರಿಸಿ ಪ್ರಮಾಣ ಪತ್ರ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಸದರಿ ಮೀಸಲಾತಿಯನ್ನು ಪಡೆಯಲು ಮಂಡಿಸಬೇಕಾದ ಪ್ರಮಾಣ ಪತ್ರವನ್ನು ದಿನಾಂಕ 13.2.2001 ರ ಸುತ್ತೋಲೆ ಸಂಖ್ಯೆ ಸಿಆಸುಇ 8 ಸೆನೆನಿ 2001 ರನ್ವಯ ನಿಗದಿಪಡಿಸಲಾಗಿದೆ.

ರಾಜ್ಯದಲ್ಲಿ ಹಿರಿಯ ಪತ್ರಕರ್ತರಿಗೆ ಮಾಶಾಸನ ಕೊಡುವುದು

1500 (1982) ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ತುರುವೇಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವಾರ್ತಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪತ್ರಿಕಾ ಮಾಧ್ಯಮಕ್ಕೆ ಸರ್ಕಾರ ಯಾವ ಯಾವ ಸೌಲಭ್ಯಗಳನ್ನು ನೀಡಿದೆ?